# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 850 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 13/03/2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಯುವನಿಧಿ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಇದರಲ್ಲಿ ಖರ್ಚಾದ ಹಾಗೂ ಬಾಕಿ ಉಳಿದ ಹಣವೆಷ್ಟು; (ವಿವರ ನೀಡುವುದು) | 2024-25ನೇ ಸಾಲಿನಲ್ಲಿ ಯುವನಿಧಿ ಯೋಜನೆಗೆ ಸರ್ಕಾರದಿಂದ ಒಟ್ಟು ರೂ.292.96 ಕೋಟಿ ಬಿಡುಗಡೆಯಾಗಿದ್ದು, ರೂ.270.17 ಕೋಟಿ ಖರ್ಚಾಗಿದ್ದು, ರೂ.22.79 ಕೋಟಿ ಬಾಕಿ ಉಳಿದಿರುತ್ತದೆ. |
| ಆ) | ಸದರಿ ಯೋಜನೆಯಡಿ ನೋಂದಾಯಿಸಲ್ಪಟ್ಟ ಯುವಕ ಹಾಗೂ ಯುವತಿಯರ ಸಂಖ್ಯೆ ಎಷ್ಟು; ಇವರುಗಳಲ್ಲಿ ಎಷ್ಟು ಜನರಿಗೆ ಯುವನಿಧಿ ಹಣವನ್ನು ಮಂಜೂರು ಮಾಡಲಾಗಿದೆ; (ಪ್ರವರ್ಗವಾರು, ಜಿಲ್ಲಾ / ತಾಲ್ಲೂಕುವಾರು ಮಾಹಿತಿ ನೀಡುವುದು) | ಸದರಿ ಯೋಜನೆ ಅಡಿ ದಿನಾಂಕ: 10-03-2025ರ ಅಂತ್ಯಕ್ಕೆ 1,33,940 ಯುವಕರು ಮತ್ತು 1,28,160 ಯುವತಿಯರು ಸೇರಿದಂತೆ ಒಟ್ಟು 2,62,100 ಅಭ್ಯರ್ಥಿಗಳು ನೋಂದಾಯಿಸಿರುತ್ತಾರೆ. ಇವರುಗಳಲ್ಲಿ 1,74,170 ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗಿದೆ. ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಇ) | ವಿಶೇಷವಾಗಿ ಬೆಂಗಳೂರು ನಗರದಲ್ಲಿ ಎಷ್ಟು ಯುವಕ / ಯುವತಿಯರಿಗೆ ಈ ಹಣ ತಲುಪಿದೆ? (ಸಂಪೂರ್ಣ ವಿವರ ನೀಡುವುದು) | ಬೆಂಗಳೂರು ನಗರದಲ್ಲಿ 5,171 ಯುವಕರು ಮತ್ತು 5,566 ಯುವತಿಯರು ಸೇರಿದಂತೆ ಒಟ್ಟು 10,737 ಫಲಾನುಭವಿಗಳಿಗೆ ರೂ.14.76 ಕೋಟಿ ಮೊತ್ತದ ಹಣವನ್ನು ನೇರನಗದು ವರ್ಗಾವಣೆ ಮೂಲಕ ಪಾವತಿಸಲಾಗಿದೆ. |

ಸಂಖ್ಯೆ: ಕೌಉಜೀಇ 30 ಕೈತಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

